# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1370 |
| ಸದಸ್ಯರ ಹೆಸರು | ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 16.03.2026 |
| ಉತ್ತರಿಸ ಬೇಕಾದವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | 'ಆರೋಗ್ಯ ಸಂಜೀವಿನಿ' ಯೋಜನೆಯಡಿ ಮಂಡ್ಯ, ಮೈಸೂರು, ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ನೋಂದಾಯಿಸಿ ಕಾರ್ಯನಿರ್ವಹಿಸುತ್ತಿರುವ ಖಾಸಗಿ ಆಸ್ಪತ್ರೆಗಳು ಸಂಖ್ಯೆ ಎಷ್ಟು; ಯಾವುವು; (ಜಿಲ್ಲಾವಾರು ಮಾಹಿತಿ ನೀಡುವುದು | ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯಡಿಯಲ್ಲಿ ಮಂಡ್ಯ-04, ಮೈಸೂರು-06, ಹಾಸನ -05, ಚಾಮರಾಜನಗರ-00 ಖಾಸಗಿ ಆಸ್ಪತ್ರೆಗಳು ನೋಂದಾವಣೆಯಾಗಿರುತ್ತದೆ. |
| ಆ) | ಮೇಲ್ಕಂಡ ಜಿಲ್ಲೆಗಳಲ್ಲಿ ಹೊಸದಾಗಿ ಎಷ್ಟು ಆಸ್ಪತ್ರೆಗಳನ್ನು 'ಆರೋಗ್ಯ ಸಂಜೀವಿನಿ' ಯೋಜನೆ ವ್ಯಾಪ್ತಿಗೆ ತರಲು ಕ್ರಮವಹಿಸಲಾಗಿದೆ; | ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯಡಿಯಲ್ಲಿ ನೋಂದಾವಣೆ ಪ್ರಕ್ರಿಯೆ ಪ್ರಗತಿಯಲ್ಲಿದೆ ಹಾಗೂ ಮೇಲ್ಕಂಡ ಜಿಲ್ಲೆಗಳಲ್ಲಿ ಹೆಚ್ಚಿನ ಆಸ್ಪತ್ರೆಗಳನ್ನು ನೋಂದಾಯಿಸಲು ಜಿಲ್ಲಾಧಿಕಾರಿಗಳಿಗೆ ಕ್ರಮವಹಿಸಲು ಸೂಚಿಸಿದೆ. |
| ಇ) | ಈ ಯೋಜನೆಯಡಿ ಎಷ್ಟು ಸಂಖ್ಯೆಯ ಖಾಯಿಲೆಗಳಿಗೆ ಚಿಕಿತ್ಸೆ ಮತ್ತು ಶಸ್ತ್ರ ಚಿಕಿತ್ಸೆಯ ಸೌಲಭ್ಯಗಳು ದೊರೆಯಲಿವೆ; (ವಿವರ ನೀಡುವುದು) | ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯಡಿಯಲ್ಲಿ 2000 ಚಿಕಿತ್ಸಾ ವಿಧಾನಗಳನ್ನು ನಿಗದಿಪಡಿಸಲಾಗಿದೆ. ಚಿಕಿತ್ಸಾ ವಿಧಾನದಲ್ಲಿ Speciality ಅಡಿಯಲ್ಲಿ 28 ಚಿಕಿತ್ಸೆಯನ್ನು ನೀಡಲಾಗುತ್ತಿದೆ. (ಸರ್ಜಿಕಲ್ ಆಂಕಾಲಜಿ- 236, ಮೆಡಿಕಲ್ ಮ್ಯಾನೇಜ್ ಮೆಂಟ್-615, AB-Ark- 05) ಅಗತ್ಯಗನುಗುಣವಾಗಿ Implant -217 ದರ ನಿಗದಿಪಡಿಸಲಾಗಿದೆ. ಚಿಕಿತ್ಸಾ ವಿಧಾನಗಳ ಜೊತೆಯಲ್ಲಿ Implant ದರಗಳನ್ನು ಪಾವತಿಸಲಾಗುವುದು. |
| ಈ) | ಈ ಯೋಜನೆಯಡಿ ನೋಂದಾಯಿಸಲ್ಪಟ್ಟ ಆಸ್ಪತ್ರೆಗಳಿಗೆ ಸರ್ಕಾರದ ವತಿಯಿಂದ ನೀಡುವ ಅನುದಾನ, ಸೌಲಭ್ಯಗಳೇನು; | ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯಡಿ ನಿಗದಿತ ಚಿಕಿತ್ಸಾ ವಿಧಾನದ ಪ್ಯಾಕೇಜ್ ಅನುಸಾರ ಪಾವತಿಸಲಾಗುವುದು. CGHS ಮಾದರಿಯಲ್ಲಿ HBP-2022 ಪ್ಯಾಕೇಜ್ ದರ ಸಹ ಅರೆ-ಖಾಸಗಿ ವರ್ಗದ ಕೊಠಡಿಗಳಿಗೆ 10% ಮತ್ತು ಖಾಸಗಿ ವರ್ಗದ ಕೊಠಡಿಗಳಿಗೆ 25% ನೀಡಲಾಗುವುದು. ಮುಂದುವರೆದು NABH ಮಾನ್ಯತೆ ಪಡೆದ ಆಸ್ಪತ್ರೆಗಳಿಗೆ ಶೇ. 15% ಹೆಚ್ಚುವರಿ ಪ್ರೋತ್ಸಾಹ ಧನ ನೀಡಲಾಗುವುದು |
| | | |

| | | |
|---|---|---|
| ಉ) | ಪ್ರಮುಖ ಖಾಸಗಿ ಆಸ್ಪತ್ರೆಗಳು ಈ ಯೋಜನೆಯಡಿ ನೋಂದಾಯಿಸಿಕೊಳ್ಳಲು ಹಿಂದೇಟು ಹಾಕುತ್ತಿರುವುದರಿಂದ ಗುಣಮಟ್ಟದ ಚಿಕಿತ್ಸೆ ಲಭ್ಯವಾಗುತ್ತಿಲ್ಲ ಎನ್ನುವ ಆರೋಪಗಳ ಕುರಿತು ಸರ್ಕಾರದ ನಿಲುವೇನು? | ನೋಂದಾಯಿತ ಆಸ್ಪತ್ರೆಗಳ ಮೂಲಕ ಗುಣಮಟ್ಟದ ಚಿಕಿತ್ಸೆಯನ್ನು ನೀಡಲು ಕ್ರಮವಹಿಸಲಾಗುತ್ತಿದೆ. ಅದರಂತೆ Claim Verification ಸಮಯದಲ್ಲಿ ಖಾತ್ರಿಗೊಳಿಸಲಾಗುತ್ತಿದೆ. ಮುಂದುವರೆದು ಪ್ರಮುಖ ಆಸ್ಪತ್ರೆಗಳು ಯೋಜನೆಯಡಿ ನೋಂದಾಯಿಸಿಕೊಳ್ಳಲು ಹಿಂದೇಟು ಹಾಕುತ್ತಿರುವುದು ಗಮನಕ್ಕೆ ಬಂದಿದ್ದು CGHS ದರಗಳ ಅನುಸಾರ ಪರಿಷ್ಕೃತ ಪ್ಯಾಕೇಜ್ ನೀಡಲು ಸರ್ಕಾರದ ಪರಿಶೀಲನೆಯಲ್ಲಿದೆ. ಅದರಂತೆ ಯೋಜನೆಯಡಿಯಲ್ಲಿ ಗುಣಮಟ್ಟದ ಚಿಕಿತ್ಸೆ ನೀಡಲು ಕ್ರಮವಹಿಸಲಾಗುತ್ತಿದೆ. |

ಆಕುಕ 61 ಎಸ್‌ಬಿವಿ 2026

(ದಿನೇಶ್ ಗುಂಡೂರಾವ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು